# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ"ದ ಗ್ರಂಥಾಲಯ ಮೇಲ್ವಿಚಾರಕರ ಗೌರವಧನ ರೂ. 12,000/-ಗಳನ್ನು ಪಾವತಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.ಪಿ.ಆರ್. 62 ಜಿ.ಪಿ.ಎಸ್ 2020, ದಿನಾಂಕ: 27-05-2021.
2. ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಎಫ್ ಡಿ 95 ಇಎಕ್ಸ್ ಪಿ-6/2020,(E) ದಿನಾಂಕ:12.04.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹೆಸರನ್ನು "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಎಂದು ಮರು ಪದನಾಮೀಕರಿಸಿದೆ. "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ದ ಕೆಲಸದ ವೇಳೆಯನ್ನು ದಿನಾಂಕ:01-06-2021 ರಿಂದ ಜಾರಿಗೆ ಬರುವಂತೆ ಪ್ರಸ್ತುತ ಇರುವ 4.00 ಗಂಟೆಯಿಂದ 6.00 ಗಂಟೆವರೆಗೆ ಅಂದರೆ ಮಂಗಳವಾರ, ಬುಧವಾರ, ಗುರುವಾರ ಮತ್ತು ಶುಕ್ರವಾರಗಳಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಹಾಗೂ ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಹಾಗೂ ಶನಿವಾರ ಮತ್ತು ಭಾನುವಾರದಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಮಧ್ಯಾಹ್ನ 2.00 ರಿಂದ ಸಂಜೆ 5.00 ಗಂಟೆವರೆಗೆ ನಿಗಧಿಪಡಿಸಿದೆ.

ಹೆಚ್ಚಿದ ಗಂಟೆಗಳು ಮತ್ತು ವಿಭಜಿತ ಸಮಯವನ್ನು ಗಮನದಲ್ಲಿಟ್ಟುಕೊಂಡು ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ಮಾಸಿಕ ಗೌರವಧನವನ್ನು ರೂ. 7,000/- ಗಳಿಂದ ರೂ.12,000/- ಗಳಿಗೆ ಹೆಚ್ಚಿಸಿ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಆದೇಶಿಸಿದೆ. ಹೆಚ್ಚುವರಿ ಗೌರವಧನವನ್ನು ಪಾವತಿಸುವ ಬಗ್ಗೆ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದಾಗಿ ತಿಳಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಗ್ರಂಥಾಲಯಗಳಿಗಾಗಿ ಗ್ರಾಮ ಪಂಚಾಯಿತಿ ಸಂಗ್ರಹಿಸುವ ಉಪಕರವನ್ನು ರಾಜ್ಯದ ಸಂಚಿತ ನಿಧಿಗೆ ಜಮಾ ಮಾಡಬೇಕು ಮತ್ತು ಆದರ್ಶಪ್ರಾಯವಾಗಿ ಅದೇ ಮೊತ್ತವನ್ನು ಗ್ರಂಥಾಲಯಗಳನ್ನು ನಡೆಸಲು ಮತ್ತು ಗ್ರಂಥಾಲಯ ಮೇಲ್ವಿಚಾರಕರ ಗೌರವಧನವನ್ನು ಪಾವತಿಸಲು ಅನುಮೋದಿಸಿರುತ್ತದೆ ಹಾಗೂ ಗ್ರಂಥಾಲಯಗಳು ಸ್ವಾವಲಂಬಿಯಾಗಲು ಮತ್ತು ಉಪಕರದ ಮೊತ್ತದಿಂದ ನಡೆಸಲು ಉಪಕರವನ್ನು ಹೆಚ್ಚಿಸುವ ಅಗತ್ಯವಿರುತ್ತದೆ ಎಂದು ತಿಳಿಸಿರುತ್ತದೆ.

The Karnataka Public Libraries Act, 1965 ರ ಪ್ರಕರಣ 30 ರಡಿ ಸ್ಥಳೀಯ ಪ್ರಾಧಿಕಾರಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಯ ಮೇಲೆ ಪ್ರತಿ ಒಂದು ರೂಪಾಯಿಗೆ ಕನಿಷ್ಠ 3 ಪೈಸೆಯಿಂದ ಗರಿಷ್ಠ 6 ಪೈಸೆವರೆಗೆ ಗ್ರಂಥಾಲಯ ಉಪಕರ ವಿಧಿಸಿ, ವಸೂಲಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಸದರಿ ಕಾಯ್ದೆಯ ಪ್ರಕರಣ 30(4) ರಡಿ ಸ್ಥಳೀಯ ಪ್ರಾಧಿಕಾರಗಳು ಈ ರೀತಿ ವಸೂಲಿ ಮಾಡಿದ ಗ್ರಂಥಾಲಯ ಉಪಕರದ ಶೇಕಡ 10 ರಷ್ಟನ್ನು ಗ್ರಾಮ ಪಂಚಾಯತಿಗಳು ಉಪಯೋಗಿಸಿಕೊಳ್ಳಬಹುದಾಗಿದೆ.

ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸಿದ ತೆರಿಗೆ ಮೊತ್ತದ ಮೇಲೆ ಶೇಕಡ 6 ರಷ್ಟು ಗ್ರಂಥಾಲಯ ಉಪಕರವನ್ನು ವಿಧಿಸಿ, ವಸೂಲಿ ಮಾಡಿದ ಮೊತ್ತವನ್ನು ಗ್ರಂಥಾಲಯ ನಿರ್ವಹಣೆಗಾಗಿ ಉಪಯೋಗಿಸಿಕೊಳ್ಳುವಂತೆ ಸುತ್ತೋಲೆಗಳ ಮೂಲಕ ತಿಳಿಸಲಾಗಿತ್ತು.

ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರದಲ್ಲಿ ಶೇಕಡ 10 ರಷ್ಟನ್ನು ಗ್ರಾಮ ಪಂಚಾಯತಿಗಳು ಗ್ರಂಥಾಲಯ ನಿರ್ವಹಣೆಗಾಗಿ ಉಪಯೋಗಿಸಿಕೊಂಡು, ಇನ್ನುಳಿದ ಶೇಕಡ 90 ರಷ್ಟನ್ನು ರಾಜ್ಯ ಸಂಚಿತ ನಿಧಿಗೆ ಕಡ್ಡಾಯವಾಗಿ ಜಮಾ ಮಾಡಿದ್ದಲ್ಲಿ, ರೂ.12,000/-ಗಳ ಗೌರವಧನವನ್ನು ಸರ್ಕಾರದಿಂದ ಪಾವತಿಸಲಾಗುವುದು ಮತ್ತು ರಾಜ್ಯ ಸಂಚಿತ ನಿಧಿಗೆ ಜಮಾ ಮಾಡಲು ನೂತನ ಲೆಕ್ಕ ಶೀರ್ಷಿಕೆ 0202-04-102-0-02 ಗ್ರಂಥಾಲಯ ಉಪಕರ (Library Cess) ಅನ್ನು ತೆರೆಯಲಾಗಿದೆ. ಗ್ರಂಥಾಲಯದ ಉಪಕರದ ಮೊತ್ತವನ್ನು ಸಂಚಿತ ನಿಧಿಗೆ ಜಮೆ ಮಾಡುವ ಎಲ್ಲಾ ಸಂಬಂಧಪಟ್ಟ DDO ಗಳನ್ನು ಸದರಿ ನೂತನ ಲೆಕ್ಕ ಶೀರ್ಷಿಕೆಗೆ K2 ರಡಿ ಮ್ಯಾಪಿಂಗ್ ಮಾಡಿಕೊಳ್ಳಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

## ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.ಪಿ.ಆರ್. 62 ಜಿ.ಪಿ.ಎಸ್. 2020, ಬೆಂಗಳೂರು. ದಿನಾಂಕ:27.08.2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರದಲ್ಲಿ ಶೇಕಡ 10 ರಷ್ಟನ್ನು ಗ್ರಾಮ ಪಂಚಾಯತಿಗಳು ಗ್ರಂಥಾಲಯ ನಿರ್ವಹಣೆಗಾಗಿ ಉಪಯೋಗಿಸಿಕೊಂಡು, ಇನ್ನುಳಿದ ಶೇಕಡ 90 ರಷ್ಟನ್ನು ರಾಜ್ಯ ಸಂಚಿತ ನಿಧಿಗೆ ಕಡ್ಡಾಯವಾಗಿ ಜಮಾ ಮಾಡಿದ್ದಲ್ಲಿ, ರೂ.12,000/-ಗಳ ಗೌರವಧನವನ್ನು ಸರ್ಕಾರದಿಂದ ಪಾವತಿಸಲಾಗುವುದು ಮತ್ತು ರಾಜ್ಯ ಸಂಚಿತ ನಿಧಿಗೆ ಜಮಾ ಮಾಡಲು ನೂತನ ಲೆಕ್ಕ ಶೀರ್ಷಿಕೆ 0202-04-102-0-02 ಗ್ರಂಥಾಲಯ ಉಪಕರ (Library Cess) ಅನ್ನು ತೆರೆಯಲಾಗಿದೆ. ಗ್ರಂಥಾಲಯದ ಉಪಕರದ ಮೊತ್ತವನ್ನು ಸಂಚಿತ ನಿಧಿಗೆ ಜಮೆ ಮಾಡುವ ಎಲ್ಲಾ ಸಂಬಂಧಪಟ್ಟ DDO ಗಳನ್ನು ಸದರಿ ನೂತನ ಲೆಕ್ಕ ಶೀರ್ಷಿಕೆಗೆ K2 ರಡಿ ಮ್ಯಾಪಿಂಗ್ ಮಾಡಿಕೊಳ್ಳಲು ಸರ್ಕಾರವು

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್ ಡಿ 95 ಇಎಕ್ಸ್ ಪಿ-6/2020, (E) ದಿನಾಂಕ:12.04.2021 ಮತ್ತು ಟಿಪ್ಪಣಿ ಸಂಖ್ಯೆ: ಆಇ 95 ವೆಚ್ಚ-6/2020)(ಇ), ದಿನಾಂಕ:17.08.2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27/8/21

**(ಉಮಾ ಮಹಾದೇವನ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಹಳೆ ಕಟ್ಟಡ ಕಛೇರಿ, ಕೆ.ಜಿ.ರಸ್ತೆ, ಬೆಂಗಳೂರು.
4. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ನಿರ್ದೇಶಕರು, ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
8. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳು. (ಆಯಾ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ)
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ಆಯಾ ಗ್ರಾಮ ಪಂಚಾಯಿತಿಗಳ "ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.
10. ವ್ಯವಸ್ಥಾಪಕರು, ಭಾರತೀಯ ಸ್ಟೇಟ್‌ಬ್ಯಾಂಕ್, ವಿಧಾನಸೌಧ ಶಾಖೆ, ಬೆಂಗಳೂರು-01-ಇವರಿಗೆ ಅಗತ್ಯ ಕ್ರಮಕ್ಕಾಗಿ.
11. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
12. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
13. ಮಾಹಿತಿ ಕೇಂದ್ರ/ ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತಕ್ಕೆ.